ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ ಮತ್ತು ನ್ಯಾಕ್ ನಿಂದ 'ಬಿ' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440, ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 Email: jsscwk@gmail.com www.jsscwkgl.org

**ಪ್ರಕಟಣೆಯ ಕೃಪೆಗಾಗಿ**

**ಎನ್ಎಸ್ಎಸ್ ಪರಿಕಲ್ಪನೆ ಸಾಕಾರಕ್ಕೆ ಸಹಕರಿಸಿ**
**ಎನ್ಎನ್ಎಸ್ ಶಿಬಿರದಲ್ಲಿ ಶ್ರೀ ಬಿ.ಮಹದೇವಸ್ವಾಮಿ ಸಲಹೆ**

ಕೊಳ್ಳೇಗಾಲ: 13.3.2019 ವಿದ್ಯಾರ್ಥಿಗಳಲ್ಲಿ ಬದಲಾವಣೆಯ ಪರ್ವವನ್ನು ಹುಟ್ಟುಹಾಕುವ ಎನ್ಎಸ್ಎಸ್ ಪರಿಕಲ್ಪನೆಯನ್ನು ಸಾಕಾರಗೊಳಸಲು ಗ್ರಾಮಸ್ಥರ ಸಹಕಾರ ಅಗತ್ಯ ಎಂದು ಬಿ.ಮಹದೇವಸ್ವಾಮಿ , ಕೊಳ್ಳೇಗಾಲ ವಲಯ ಅರಣಾಧಿಕಾರಿ ಇವರು ತಿಳಿಸಿದರು.

ಹನೂರು ತಾಲ್ಲೋಕಿನ ಕಾಮಗೆರೆಯಲ್ಲಿ ಇಲ್ಲಿನ ಜೆಎಸ್ಎಸ್ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿರುವ ವಾರ್ಷಿಕ ಶಿಬಿರದಲ್ಲಿ ಮಾತನಾಡಿದರು.

ಶಿಬಿರಗಳ ಮೂಲಕ ಗ್ರಾಮಸ್ಥರಲ್ಲಿ ವೈಜ್ಞಾನಿಕ ಮನೋಭಾವ, ಸ್ವಚ್ಛತೆ, ಪರಿಸರ ಸಂರಕ್ಷಣೆ, ಬಾಲ್ಯವಿವಾಹ ಸೇರಿದಂತೆ ಸರಕಾರದ ಅನೇಕ ಯೋಜನೆಗಳನ್ನು ತಿಳಿಸುವುದು ಉದ್ದೇಶವಾಗಿದೆ. ವಿದ್ಯಾರ್ಥಿಗಳು ತಮ್ಮಲ್ಲಿ ಅಡಗಿರುವ ಪ್ರತಿಭೆಗಳನ್ನು ಹೊರಹಾಕಲು, ಜಾತ್ಯಾತೀತ ಮನೋಭಾವ ಬೆಳೆಸಿಕೊಳ್ಳಲು ಶಿಬಿರ ಪೂರಕವಾಗಿದೆ ಎಂದು ತಿಳಿಸಿದರು.

ವ್ಹೆಲ್ಡ್ ಲೈಫ್ ಟ್ರಸ್ಟ್ ಆಫ್ ಕರ್ನಾಟಕದ ಅಧ್ಯಕ್ಷರಾದ ಶ್ರೀ ಜಾನ್ ಪೀಟರ್ ರವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗಾಂಧೀಜಿಯವರ ಕನಸಿನ ಕೂಸಾದ ಗ್ರಾಮಸ್ವರಾದ ಪರಿಕಲ್ಪನೆಯನ್ನು ಸಾಕಾರಗೊಳಸುವ ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳ ಬೌದ್ಧಿಕ ಬೆಳವಣಿಗೆಗೆ ಗ್ರಾಮೀಣ ಬದುಕನ್ನು ತಿಳಿಯಲು ಸೇವೆ ಸಲ್ಲಿಸಲು ಇದೊಂದು ಉತ್ತಮ ವೇದಿಕೆ ಎಂದು ತಿಳಿಸಿದರು. ಸಮಾಜಸೇವಕರಾದ ಶ್ರೀ ಎನ್ ಮಹೇಶ್‌ಪಟೇಲ್ ಮಾತನಾಡಿದರು. ಶಿಭಿರಾಧಿಕಾರಿ ಪ್ರೊ.ಬಸವರಾಜು, ಸಹ ಶಿಭಿರಾಧಿಕಾರಿ ಪ್ರೊ. ಬಸವದತ್ತ ಮಹದೇವಪ್ರಸಾದ್ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಶಿಬಿರಾರ್ಥಿಗಳು ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮ ನಡೆಸಿಕೊಟ್ಟರು.

ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿರುವ ವಾರ್ಷಿಕ ಶಿಬಿರ



ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿರುವ ವಾರ್ಷಿಕ ಶಿಬಿರದಲ್ಲಿ
ಶ್ರೀ ಜಾನ್ ಪೀಟರ್ ಶಿಬಿರಾರ್ಥಿಗಳನ್ನು ಕುರಿತು ಮಾತನಾಡುತ್ತಿರುವುದು.




ಶಿಬಿರಾರ್ಥಿಗಳು ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮದಲ್ಲಿ ತೊಡಗಿರುವುದು.

